(35)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಜೂನ್ 2014ರಿಂದ ಮಾರ್ಚ್ 2014ರವರೆಗೆ ವಯೋ ನಿವೃತ್ತಿಯಾಗಲಿರುವ ಶಿಕ್ಷಕರು/ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸುವ ಕುರಿತು.

ಓದಲಾಗಿದೆ:- ಸರ್ಕಾರದ ಆದೇಶ ಸಂಖ್ಯೆ:ಇಡಿ 64 ಎಸ್‌ಟಿಬಿ 2013, ದಿನಾಂಕ:02/09/2013.

**ಪ್ರಸ್ತಾವನೆ :**

ಮೇಲೆ ಓದಲಾದ ದಿನಾಂಕ:02/09/2013ರ ಸರ್ಕಾರದ ಆದೇಶದಲ್ಲಿ ರಾಜ್ಯದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ 2013–14ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಯೋ ನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಮುಂದುವರೆಸಿದಲ್ಲಿ ಗುಣಮಟ್ಟದ ಶಿಕ್ಷಣ ನೀಡಲು ಅನುವಾಗುವುದೆಂಬ ಉದ್ದೇಶದಿಂದ ಅವರುಗಳ ಸೇವೆಯನ್ನು ಕೆಲವೊಂದು ಷರತ್ತುಗಳನ್ನು ವಿಧಿಸಿ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಮುಂದುವರೆಸಲು ಅನುಮತಿ ನೀಡಲಾಗಿತ್ತು.

ಪ್ರಸ್ತುತ 2014–15ನೇ ಸಾಲಿನಲ್ಲಿ ಶೈಕ್ಷಣಿಕ ವರ್ಷದ ಅವಧಿಯಲ್ಲಿ ಸಹ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಗಳು ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಹಲವಾರು ಶಿಕ್ಷಕರು ಮತ್ತು ಉಪನ್ಯಾಸಕರು ವಯೋನಿವೃತ್ತಿಯಾಗಲಿರುವ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಪಾಠ ಪ್ರವಚನಗಳು ಸುಸೂತ್ರವಾಗಿ ನಡೆಯಲು ಅನುವಾಗುವಂತೆ 2014–15ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಯೋನಿವೃತ್ತಿಯಾಗಲಿರುವ ಶಿಕ್ಷಕರು ಮತ್ತು ಉಪನ್ಯಾಸಕರುಗಳ ಸೇವೆಯನ್ನು ಶೈಕ್ಷಣಿಕ ವರ್ಷದ ಅಂತ್ಯದವರೆಗೂ ಮುಂದುವರೆಸುವುದು ಸೂಕ್ತವೆಂದು ಸರ್ಕಾರವು ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ : ಇಡಿ 64 ಎಸ್‌ಟಿಬಿ 2013, ಬೆಂಗಳೂರು, ದಿನಾಂಕ : 25/06/2014.**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ 2014–15 ನೇ ಸಾಲಿನ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಅಂದರೆ ಜೂನ್ 2014ರ ಮಾಹೆಯಿಂದ ಮಾರ್ಚ್ 2015ರವರೆಗೆ ವಯೋನಿವೃತ್ತರಾಗಲಿರುವ ಸರ್ಕಾರಿ ಪ್ರಾಥಮಿಕ/ಪ್ರೌಢಶಾಲಾ ಶಿಕ್ಷಕರು ಹಾಗೂ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರನ್ನು ಏಪ್ರಿಲ್ 2015ರವರೆಗೆ ಸೇವೆಯಲ್ಲಿ ಮುಂದುವರೆಸಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಸರ್ಕಾರದ ಅನುಮತಿ ನೀಡಲಾಗಿದೆ.

1) ಈ ರೀತಿ ನೇಮಕಗೊಂಡವರಿಗೆ ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 313(ಬಿ) ಪ್ರಕಾರ ವೇತನವನ್ನು ನಿಗದಿಪಡಿಸತಕ್ಕದ್ದು;
2) ಶೈಕ್ಷಣಿಕ ವರ್ಷದ ಪ್ರಾರಂಭದ ನಂತರ, ಅಂದರೆ ಜೂನ್ ತಿಂಗಳ ನಂತರ ಫೆಬ್ರವರಿ ತಿಂಗಳ ಅಂತ್ಯದವರೆಗೆ ನಿವೃತ್ತರಾಗುವ ಶಿಕ್ಷಕರು / ಉಪನ್ಯಾಸಕರಿಗೆ (ಮಾರ್ಚ್ ತಿಂಗಳವರೆಗೆ ಕಾರ್ಯನಿರ್ವಹಿಸಲು) ಮಾತ್ರ ಇದನ್ನು ಅನ್ವಯವಾಗತಕ್ಕದ್ದು;

ಶಿಕ್ಷಕರು/ಉಪನ್ಯಾಸಕರು ನೇಮಕಗೊಂಡಲ್ಲಿ ಇಂತಹ ನೇಮಕಾತಿ ತಾನೇತಾನಾಗಿ ರದ್ದುಗೊಳ್ಳುತ್ತದೆ.

4) ಶಿಕ್ಷಕರನ್ನು ಕಾರ್ಯಭಾರ ಇರುವ ಹುದ್ದೆಯೆದುರು ಮಾತ್ರ ಮುಂದುವರೆಸತಕ್ಕದ್ದು ಹಾಗೂ ತಾಲ್ಲೂಕಿನಲ್ಲಿ ಹೆಚ್ಚುವರಿ ಶಿಕ್ಷಕರು ಲಭ್ಯವಿಲ್ಲವೆಂಬ ಬಗ್ಗೆ ಕ್ಷೇತ್ರ ಶಿಕ್ಷಣಾಧಿಕಾರಿ ದೃಢೀಕರಿಸಿದ ನಂತರವಷ್ಟೇ ಅನುಮತಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 672 ವೆಚ್ಚ-8/2014, ದಿನಾಂಕ: 13.06.2014ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಬಿ. ಪಟಗಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಶಿಕ್ಷಣ ಇಲಾಖೆ (ಸಾಮಾನ್ಯ).

## ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 64 ಎಸ್‌ಟಿಬಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:26/06/2013

## ತಿದ್ದುಪಡಿ ಆದೇಶ

ಸರ್ಕಾರದ ಆದೇಶ ಸಂಖ್ಯೆ ಇಡಿ 64 ಎಸ್‌ಟಿಬಿ 2013 ಬೆಂಗಳೂರು, ದಿನಾಂಕ:25.06.2014 ರ, ಆದೇಶದ ವಿಷಯದ ಎರಡನೇ ಸಾಲಿನಲ್ಲಿ ಜೂನ್ 2014ರಿಂದ ಮಾರ್ಚ್ 2014ರವರೆಗೆ ಎಂಬುದನ್ನು ಜೂನ್ 2014ರಿಂದ ಮಾರ್ಚ್ 2015ರವರೆಗೆ ಎಂದು ತಿದ್ದಿಕೊಂಡು ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್.ಬಿ. ಪಟಗಾರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಶಿಕ್ಷಣ ಇಲಾಖೆ (ಸಾಮಾನ್ಯ).

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರ, ಬೆಂಗಳೂರು-12**

ಸಂಖ್ಯೆ ಪಪೂಶಿ/ಸಿಬ್ಬಂದಿ-2/ಉನೇ/ನಿಉಮುಂ/278/2013-14 ದಿನಾಂಕ: 19.7.2014

ಮೇಲಿನ ಸರ್ಕಾರದ ಆದೇಶಗಳ ಪ್ರತಿಯನ್ನು ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ ಜಿಲ್ಲಾ ಎಲ್ಲಾ ಉಪನಿರ್ದೇಶಕರಿಗೆ ಕಳುಹಿಸಿದೆ.

ಜಂಟಿ ನಿರ್ದೇಶಕರು (ಆ).
ಪದವಿ ಪೂರ್ವ ಶಿಕ್ಷಣ ಇಲಾಖೆ

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳು/ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಉಪನ್ಯಾಸಕರ/ ಶಿಕ್ಷಕರ ಹುದ್ದೆಗಳಿಗೆ ಅತಿಥಿ ಉಪನ್ಯಾಸಕರು/ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅನುಮತಿ ನೀಡುವ ಕುರಿತು.

ಓದಲಾಗಿದೆ:-
1) ಸರ್ಕಾರದ ಆದೇಶ ಸಂಖ್ಯೆ:ಇಡಿ 87 ಯೋಯೋಕ 2013, ದಿನಾಂಕ:14/08/2013.
2) ಸರ್ಕಾರದ ಆದೇಶ ಸಂಖ್ಯೆ:ಇಡಿ 194 ಎಸ್‌ಟಿಬಿ 2013, ದಿನಾಂಕ:13/09/2013.

---

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ : (1) ಮತ್ತು (2) ರಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಒಟ್ಟು 1130 ಉಪನ್ಯಾಸಕರ ಹುದ್ದೆಗಳನ್ನು ಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ತುಂಬಿಕೊಳ್ಳುವವರೆಗೆ ಹಾಗೂ ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು 9405 ಸಹ ಶಿಕ್ಷಕರ ಹುದ್ದೆಗಳು ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಒಟ್ಟು 1137 ಸಹ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವವರೆಗೆ ಅಥವಾ ಮಾರ್ಚ್ 2014ರವರೆಗೆ ಇವೆರಡರಲ್ಲಿ ಯಾವುದು ಮೊದಲೊ ಅಲ್ಲಿಯವರೆಗೆ ಕೆಲವೊಂದು ಷರತ್ತು ಹಾಗೂ ನಿಬಂಧನೆಗಳನ್ನು ವಿಧಿಸಿ ಅತಿಥಿ ಶಿಕ್ಷಕರು / ಉಪನ್ಯಾಸಕರುಗಳನ್ನು ಸಂಪೂರ್ಣವಾಗಿ ಅಡ್-ಹಾಕ್ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳಲು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು, ಇವರಿಗೆ ಅನುಮತಿ ನೀಡಲಾಗಿತ್ತು.

JD (A)
DA-776

ರಾಜ್ಯದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ 2014-15ನೇ ಸಾಲಿನಲ್ಲಿ ಉಪನ್ಯಾಸಕರ ಹುದ್ದೆಗಳು ವಿವಿಧ ಕಾರಣಗಳಿಂದ ತೆರವಾಗಿರುತ್ತದೆ. ಅದೇ ರೀತಿ ರಾಜ್ಯದ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿಯೂ ಹುದ್ದೆಗಳು ತೆರವಾಗಿರುತ್ತವೆ. ಆದುದರಿಂದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಹಾಗೂ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಉಪನ್ಯಾಸಕರ/ಸಹ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮೂಲಕ ಭರ್ತಿಮಾಡಿಕೊಳ್ಳುವವರೆಗೆ ಹಿಂದಿನ ಸಾಲಿನಲ್ಲಿ ವಿಧಿಸಿದ ಷರತ್ತು ಮತ್ತು ನಿಬಂಧನೆಗಳನ್ವಯ ಅತಿಥಿ ಶಿಕ್ಷಕರನ್ನು ಸಂಪೂರ್ಣವಾಗಿ ಅಡ್-ಹಾಕ್ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳುವುದು ರಾಜ್ಯದ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಅವಶ್ಯವೆಂದು ಸರ್ಕಾರವು ಮನಗಂಡಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

18/6/14

**ಸರ್ಕಾರದ ಆದೇಶ ಸಂಖ್ಯೆ: ಇಡಿ 194 ಎಸ್‌ಟಿಬಿ 2013 ಬೆಂಗಳೂರು, ದಿನಾಂಕ: 13/06/2014**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜು/ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ಈ ಕೆಳಕಂಡಂತೆ ಖಾಲಿ ಇರುವ

ಉಪನ್ಯಾಸಕರ/ಸಹ ಶಿಕ್ಷಕರ ಹುದ್ದೆಗಳನ್ನು ಅತಿಥಿ ಉಪನ್ಯಾಸಕರು/ಸಹ ಶಿಕ್ಷಕರನ್ನು ಆಯ್ಕೆ ಮಾಡಿಕೊಳ್ಳುವ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರದ ಅನುಮತಿ ನೀಡಲಾಗಿದೆ.

| ಕ್ರ.ಸಂ. | ಹುದ್ದೆಗಳು | ಅನುಮತಿ ನೀಡಲಾದ ಹುದ್ದೆಗಳ ಸಂಖ್ಯೆ |
|---|---|---|
| 1. | ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು | 1130 |
| 2. | ಪ್ರಾಥಮಿಕ ಶಾಲೆಗಳ ಸಹ ಶಿಕ್ಷಕರು | 9405 |
| 3. | ಪ್ರೌಢ ಶಾಲೆಗಳ ಸಹ ಶಿಕ್ಷಕರು | 1137 |

ಮೇಲ್ಕಂಡ ಹುದ್ದೆಗಳಿಗೆ ನೇಮಕಾತಿ ಆಗುವವರೆಗೆ ಅಥವಾ ಮಾರ್ಚ್ 2015ರವರೆಗೆ ಇದರಲ್ಲಿ ಯಾವುದು ಮೊದಲೊ ಅಲ್ಲಿಯವರೆಗೆ ಗೌರವ ಶಿಕ್ಷಕರು/ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಈ ಕೆಳಕಂಡ ಷರತ್ತುಗಳು ಮತ್ತು ನಿಬಂಧನೆಗಳನ್ನು ಅನ್ವಯಿಸಿ ಸಂಪೂರ್ಣವಾಗಿ ಅಡ್-ಹಾಕ್ ವ್ಯವಸ್ಥೆಯಡಿ ಆಯ್ಕೆ ಮಾಡಿಕೊಳ್ಳಲು ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಹಾಗೂ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಅನುಮತಿ ನೀಡಲಾಗಿದೆ. ಹಾಗೂ ಇಲಾಖೆಯ ಆಯವ್ಯಯದಲ್ಲಿ ಈಗಾಗಲೇ ಒದಗಿಸಿರುವ ಅನುದಾನದಿಂದಲೇ ಸದರಿ ಶಿಕ್ಷಕರ/ ಉಪನ್ಯಾಸಕರ ಗೌರವ ಧನವನ್ನು ಪಾವತಿಸತಕ್ಕದ್ದು.

<u>ಷರತ್ತುಗಳು:</u>

1) ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ ಎಲ್ಲಾ ಜಿಲ್ಲೆಗಳಲ್ಲಿ ಸಮಾನವಾಗಿ ಇಲ್ಲದಿರುವುದರಿಂದ ಮತ್ತು ಕೆಲವು ಜಿಲ್ಲೆಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡು ಬಂದಿರುವುದರಿಂದ ಶಿಕ್ಷಕರನ್ನು ಮರು ಹಂಚಿಕೆ ಮಾಡಲು ತುರ್ತಾಗಿ ಕ್ರಮ ಕೈಗೊಳ್ಳುವುದು.
2) ಶಿಕ್ಷಕರ ನೇಮಕಾತಿ ಹಾಗೂ ಶಾಲಾವಾರು ಹಂಚಿಕೆ ಬಗೆಗಿನ ನೀತಿಗಳನ್ನು ಇಲಾಖೆ ಸುಧಾರಿಸುವ ಕ್ರಮವಾಗಿ (Rationalite) ಮಾಡುವುದು.
3) ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಹೆಚ್ಚುವರಿ ಶಿಕ್ಷಕರು ಇರುವುದು ಕಂಡುಬಂದಿದ್ದು, ಅವಶ್ಯಕತೆ ಇರುವ ಕಡೆ ಮರು ಹಂಚಿಕೆ ಮಾಡುವುದು.
4) ಶಿಕ್ಷಕರ ಸಂಪನ್ಮೂಲವನ್ನು ಹೆಚ್ಚು ಆರ್ಥಿಕವಾಗಿ, ಹೆಚ್ಚು ಪರಿಣಾಮಕಾರಿಯಾಗಿ ಬಳಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.
5) ಅನುದಾನಿತ ಶಾಲೆಗಳಲ್ಲಿ ಇರುವ ಹೆಚ್ಚುವರಿ ಶಿಕ್ಷಕರನ್ನು ಕೊರತೆ ಇರುವ ಸರ್ಕಾರಿ ಶಾಲೆಗಳಲ್ಲಿ (O.O.D)ಆಧಾರದ ಮೇಲೆ ಹಂಚಿಕೆ ಮಾಡುವುದು.
6) ಕೊರತೆ ಇರುವ ಶಾಲೆಗಳಿಗೆ ಹೆಚ್ಚುವರಿ ಇರುವ ಶಾಲೆಗಳಿಂದ ಶಿಕ್ಷಕರನ್ನು ಕೂಡಲೇ ಮರು ವಿನ್ಯಾಸಿಸಲು ಕ್ರಮ ವಹಿಸುವುದು.
7) ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ/ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರೇ ಮಾಡುವುದು. ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ ಸಂಬಂಧಿಸಿದ ಉಪ ನಿರ್ದೇಶಕರಿಗೆ ವಹಿಸುವುದು.

8) ಪ್ರಾಥಮಿಕ ಶಾಲಾ ಶಿಕ್ಷಕರ ಗೌರವ ಧನ ಮಾಹೆಯಾನ ರೂ. 5500/- ಪ್ರೌಢ ಶಾಲಾ ಶಿಕ್ಷಕರ ಗೌರವ ಧನ ಮಾಹೆಯಾನ ರೂ. 6000/- ಹಾಗೂ ಪದವಿ ಪೂರ್ವ ಉಪನ್ಯಾಸಕರ ಗೌರವ ಧನ ಮಾಹೆಯಾನ ರೂ. 7000/-ಗಳನ್ನು ನಿಗಧಿಪಡಿಸಿ, ಈ ಹಿಂದಿನ ಸಾಲುಗಳಲ್ಲಿ ಭರಿಸಿದ ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಭರಿಸುವುದು.

9) ಅತಿಥಿ ಶಿಕ್ಷಕರ ಆಯ್ಕೆ ಬಗ್ಗೆ ಹಾಗೂ ನೇಮಕದ ಬಗ್ಗೆ ಘಟನಾವಳಿಗಳ ಕ್ಯಾಲೆಂಡರ್ ಸಿದ್ಧಪಡಿಸುವುದು.

10) ಅತಿಥಿ ಶಿಕ್ಷಕರನ್ನು/ಉಪನ್ಯಾಸಕರನ್ನು ಆಯಾ ಹುದ್ದೆಗೆ ನಿಗಧಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡುವುದು.

11) ಮೊದಲು ಗ್ರಾಮ ಮಟ್ಟ, ಗ್ರಾಮ ಪಂಚಾಯಿತಿ ಮಟ್ಟ, ಹೋಬಳಿ ಮಟ್ಟ ಮತ್ತು ತಾಲ್ಲೂಕು ಮಟ್ಟದಂತೆ ಅತಿಥಿ ಶಿಕ್ಷಕರನ್ನು ಆಯ್ಕೆ ಮಾಡುವುದು. ಒಂದು ಗ್ರಾಮದಲ್ಲಿ ಇಬ್ಬರು ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ಪಕ್ಷದಲ್ಲಿ ಆ ಇಬ್ಬರು ಅಭ್ಯರ್ಥಿಗಳಲ್ಲಿ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡುವುದು.

12) ಅತಿಥಿ ಶಿಕ್ಷಕರನ್ನು/ ಉಪನ್ಯಾಸಕರನ್ನು ಕಾರ್ಯಭಾರವಿಲ್ಲದೇ ನಿಯಮಬಾಹಿರವಾಗಿ ಆಯ್ಕೆ ಮಾಡಿದ್ದಲ್ಲಿ ಸಂಬಂಧಿಸಿದ ಮುಖ್ಯೋಪಾಧ್ಯಾಯರು/ಉಪ ನಿರ್ದೇಶಕರು(ಡಿಡಿಪಿಯು) ಗಳನ್ನೇ ಜವಾಬ್ದಾರರನ್ನಾಗಿ ಮಾಡಲಾಗುವುದು.

13) ಶಿಕ್ಷಕರೆ ಇಲ್ಲದಿರುವ ಶಾಲಾ ಕಾಲೇಜುಗಳಲ್ಲಿ ಹಾಗೂ ನಿಯೋಜನೆಯಂತಹ ಬದಲಿ ವ್ಯವಸ್ಥೆ ಮಾಡಲು ಸಾಧ್ಯವಿಲ್ಲದಿರುವ ಸ್ಥಳದಲ್ಲಿ ಮಾತ್ರ ಅತಿಥಿ ಶಿಕ್ಷಕರನ್ನು ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳತಕ್ಕದ್ದು.

14) ಮೇಲ್ಕಂಡ ಎಲ್ಲಾ ಆಯ್ಕೆಗಳನ್ನು ಮೆರಿಟ್ ಆಧಾರದಲ್ಲಿ ಮಾಡಲು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಂಪೂರ್ಣ ಜವಾಬ್ದಾರರಾಗಿರುತ್ತಾರೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ಬಿ. ಪಟಗಾರ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ)
ಶಿಕ್ಷಣ ಇಲಾಖೆ (ಸಾಮಾನ್ಯ).

~~ಕರ್ನಾಟಕ ಸರ್ಕಾರ~~

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರ, ಬೆಂಗಳೂರು-12

ಸಂಖ್ಯೆ: ಪಪೂಶಿ/ಸಿಬ್ಬಂದಿ-2/ಅಉನೇ/93/2012-13

ದಿನಾಂಕ 18.6.2014

ಸರ್ಕಾರದ ಮೇಲಿನ ಆದೇಶದ ಪ್ರತಿಯನ್ನು ಪದವಿ ಪೂರ್ವ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಲಾಗಿದೆ.

ಜಂಟಿ ನಿರ್ದೇಶಕರು (ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ